1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ**.396/2023**

ಹೆಸರುಃ ಪಿ ಎನ್ ಶಿವಕುಮಾರ್ ಚಾಸಾಃ 2

ತಂದೆಃ ಪಿ ನಾಗೇಂದ್ರಪ್ಪ ಪ್ರಾಸಾ: 2

ವಯಸ್ಸುಃ 52 ವರ್ಷ

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಆಗರಬನ್ನಿಹಟ್ಟಿ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 28-11-2024 ರಂದು ಪ್ರಮಾಣ ವಚನ ಭೋಧಿಸಲಾಯಿತು .

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಮಹಜರ್ ನ್ನು ನಿಶಾನೆ.ಪಿ.2 ಎಂದು ಗುರುತಿಸಲಾಯಿತು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ.2 (ಬಿ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ.

ಮಹಜರ್ ಸಮಯದಲ್ಲಿ ಪೊಲೀಸರು ಒಂದು ಭಾವಚಿತ್ರವನ್ನು ತೆಗೆದಿರುತ್ತಾರೆ . ಸದರಿ ಭಾವಚಿತ್ರವನ್ನು ಸಾಕ್ಷಿಯು ನೋಡಿ ಗುರುತಿಸಿರುತ್ತಾರೆ . ಸದರಿ ಭಾವಚಿತ್ರವನ್ನು ಈಗಾಗಲೇ ನಿಪಿ.3 ಎಂದು ಗುರುತಿಸಲಾಗಿದೆ . ಪೊಲೀಸರ ಕೋರಿಕೆಯ ಮೇರೆಗೆ ಸದರಿ ಭಾವಚಿತ್ರ ದಲ್ಲಿ ನಿಂತಿರುತ್ತೇನೆ .

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ**

**ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷಿ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 18-07-2021 ರಂದು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ 1.00 ಗಂಟೆಯಿಂದ 02.00 ಗಂಟೆಯವರೆಗೆ , ಪೊಲೀಸರು ನನ್ನ ,ಚಾಸಾ 1 ಮತ್ತು 3 ರವರ ಸಮಕ್ಷಮ ನಿ.ಪಿ. 2 ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ . ನಿಪಿ.2 ನ್ನು ಜರುಗಿಸುವ ಕಾಲಕ್ಕೆ ನನ್ನ ಜೊತೆ ಚಾಸಾ 1 ಮತ್ತು 3 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ .

ನಿಪಿ.2 ನ್ನು ಜರುಗಿಸುವ ಸಮಯದಲ್ಲಿ ನಿಪಿ.3 ರಂತೆ ಪೋಟೋವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ . ಪೊಲೀಸರ ಕೋರಿಕೆಯ ಮೇರೆಗೆ ಸದರಿ ಪೋಟೋದಲ್ಲಿ ನಿಂತಿರುತ್ತೇನೆ .

ಘಟನೆ ನಡೆದು ಬಹಳ ವರ್ಷಗಳಾದ ಕಾರಣ ನಾನು ನನ್ನ ಮುಖ್ಯವಿಚಾರಣೆಯಲ್ಲಿ ಸದರಿ ವಿಚಾರವನ್ನು ಹೇಳಲಾಗಿರುವುದಿಲ್ಲ ಎಂದರೆ ಸರಿ .

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು - ಆರೋಪಿತರ ಪರ ವಕೀಲರಿಂದ – ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**sd/-**

**01ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**